ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ಸಮಿತಿ (ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡ ಕಲ್ಯಾಣ ಸಮಿತಿ)

ಪತ್ರಿಕೆಯ ಹೆಸರು : NAME OF THE NEWS PAPER : ಪ್ರಜಾವಾಣಿ     ದಿನಾಂಕ : DATE : 15/06/2019

# ದಲಿತರೊಂದಿಗೆ ಮದುವೆ ಮೈಸೂರು ಜಿಲ್ಲೆಯಲ್ಲಿ ಹೆಚ್ಚು

ಪ್ರಜಾವಾಣಿ ವಾರ್ತೆ 15-6-19

ಮೈಸೂರು: ಕಳೆದ ಮೂರು ವರ್ಷಗಳಲ್ಲಿ ಪರಿಶಿಷ್ಟ ಜಾತಿ, ಪಂಗಡಕ್ಕೆ ಸೇರಿದ ಯುವಕ ಅಥವಾ ಯುವತಿಯನ್ನು ಮದುವೆಯಾಗಿರುವ 797 ಜೋಡಿ ಮೈಸೂರು ಜಿಲ್ಲೆಯಲ್ಲಿ ಇದ್ದು, ಈ ಸಂಖ್ಯೆ ರಾಜ್ಯದಲ್ಲೇ ಅಧಿಕ ಎಂದು ವಿಧಾನಮಂಡಲದ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡಗಳ ಕಲ್ಯಾಣ ಸಮಿತಿಯ ಅಧ್ಯಕ್ಷ ಎಚ್.ಕೆ.ಕುಮಾರಸ್ವಾಮಿ ಶುಕ್ರವಾರ ಇಲ್ಲಿ ತಿಳಿಸಿದರು.

ಸಮಿತಿಯ ಸದಸ್ಯರು ಹಾಗೂ ಜಿಲ್ಲಾ ವ್ಯಾಪ್ತಿಯ ವಿವಿಧ ಇಲಾಖೆಯ ಅಧಿಕಾರಿಗಳೊಂದಿಗೆ ನಡೆದ ಸಭೆಯಲ್ಲಿ ಈ ಮಾಹಿತಿ ನೀಡಿದ ಅವರು, 'ಈ ಸಂಖ್ಯೆ ಅತ್ಯುತ್ತಮವಾಗಿದೆ. ಈ ಕಾರ್ಯಕ್ರಮಕ್ಕೆ ಇನ್ನೂ ಹೆಚ್ಚಿನ ಪ್ರೋತ್ಸಾಹ ಬೇಕು. ಈ ರೀತಿಯ ವಿವಾಹವಾದರೆ, ಜೋಡಿಯಲ್ಲಿ ಒಬ್ಬರಿಗೆ ಸರ್ಕಾರಿ ಉದ್ಯೋಗ ನೀಡುವಂತೆ ಸರ್ಕಾರಕ್ಕೆ ಮನವಿ ಸಲ್ಲಿಸಲಾಗುವುದು' ಎಂದರು.

ಜಿಲ್ಲೆಯಲ್ಲಿ ಸರ್ಕಾರೇತರ ಸಂಸ್ಥೆಗಳು ಸಾಮೂಹಿಕ ವಿವಾಹ ನಡೆಸುತ್ತಿದ್ದು, ಪ್ರೋತ್ಸಾಹಧನವಾಗಿ ಈ ಸಂಸ್ಥೆಗಳಿಗೆ ₹ 100 ಹಾಗೂ ಜೋಡಿಗೆ ₹ 10 ಸಾವಿರ ನೀಡುತ್ತಿರುವುದಾಗಿ ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕಿ ಬಿಂದಿಯಾ ಮಾಹಿತಿ ನೀಡಿದರು.

ಇದಕ್ಕೆ ಪ್ರತಿಕ್ರಿಯಿಸಿದ ಕುಮಾರಸ್ವಾಮಿ, ಸರ್ಕಾರೇತರ ಸಂಸ್ಥೆಗಳಿಗೆ ನೀಡುವ ಪ್ರೋತ್ಸಾಹಧನವನ್ನು ₹ 1 ಸಾವಿರಕ್ಕೆ ಹಾಗೂ ಜೋಡಿಗೆ ₹ 25 ಸಾವಿರಕ್ಕೆ ಹೆಚ್ಚಿಸುವಂತೆ ಸರ್ಕಾರಕ್ಕೆ ಮನವಿ ಸಲ್ಲಿಸುವುದಾಗಿ ತಿಳಿಸಿದರು.